# National
# Kannada
# 19.02.2026 7.35 p.m.
# ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ಆವಿಷ್ಕಾರ ಉತ್ತೇಜಿಸಿ ಮಾನವೀಯ ಮೌಲ್ಯಗಳೊಂದಿಗೆ 'ಎಐ' ಭವಿಷ್ಯ ನಿರ್ಮಿಸಲು ಪ್ರಧಾನಿ ನರೇಂದ್ರ ಮೋದಿ ಕರೆ
2. ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ; ವಿವಿಧ ಜಾಗತಿಕ ನಾಯಕರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ
3. ಭಾರತ–ನ್ಯೂಜಿಲ್ಯಾಂಡ್ ತೋಟಗಾರಿಕಾ ಸಹಕಾರದ ಜಂಟಿ ಕಾರ್ಯಕಾರಿ ಗುಂಪಿನ ಮೊದಲ ಸಭೆ ಯಶಸ್ವಿ
4. ವಿಶಾಖಪಟ್ಟಣದಲ್ಲಿ 13ನೇ ಆವೃತ್ತಿಯ ನೌಕಾಸಮರಾಭ್ಯಾಸ ಮಿಲನ್ 2026 ಉದ್ಘಾಟಿಸಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್
5. ಐಸಿಸಿ ಪುರುಷರ ಟಿ–20 ವಿಶ್ವಕಪ್ ಕ್ರಿಕೆಟ್; ಶ್ರೀಲಂಕಾ ವಿರುದ್ಧ ಜಿಂಬಾಬ್ವೆಗೆ 6 ವಿಕೆಟ್ ಜಯ

****************

ಆವಿಷ್ಕಾರಗಳನ್ನು ಉತ್ತೇಜಿಸುವ, ಒಳಗೊಳ್ಳುವಿಕೆಯನ್ನು ಬಲಪಡಿಸುವ ಮತ್ತು ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡು ಮುನ್ನಡೆಯುವ 'ಎಐ' ಭವಿಷ್ಯವನ್ನು ನಿರ್ಮಿಸಲು ನಾವೆಲ್ಲರೂ ಒಗ್ಗೂಡಬೇಕು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಕರೆ ನೀಡಿದ್ದಾರೆ.

ನವದೆಹಲಿಯಲ್ಲಿ ನಡೆದ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯ ನಾಯಕರ ಸಮಗ್ರ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಎಐ ತಂತ್ರಜ್ಞಾನವು ಇಡೀ ಮಾನವಕುಲದ ಹಿತಕ್ಕಾಗಿ ಇರುವ ಒಂದು ಹಂಚಿಕೆಯ ಸಂಪನ್ಮೂಲವಾಗಿದ್ದು, ಇದು ಎಲ್ಲರಿಗೂ ಸುಲಭವಾಗಿ ಲಭ್ಯವಾಗುವಂತಿರಬೇಕು ಎನ್ನುವುದು ಭಾರತದ ಸ್ಪಷ್ಟ ದೃಷ್ಟಿಕೋನವಾಗಿದೆ ಎಂದು ಅವರು ಪ್ರತಿಪಾದಿಸಿದರು.

ಜಾಗತಿಕ ಎಐ ಪಯಣದಲ್ಲಿ ಭಾರತ ಮಹತ್ವದ ಪಾತ್ರ ವಹಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಪ್ರಧಾನಿ, ಭಗವಾನ್ ಬುದ್ಧನ "ಸರಿಯಾದ ತಿಳುವಳಿಕೆಯಿಂದ ಮಾತ್ರ ಸರಿಯಾದ ಕ್ರಮ ಸಾಧ್ಯ" ಎಂಬ ಸಂದೇಶವನ್ನು ಸ್ಮರಿಸಿದರು.

ಎಐ ತಂತ್ರಜ್ಞಾನದ ನೈತಿಕ ಬಳಕೆಗೆ ಸಂಬಂಧಿಸಿದಂತೆ ಮೂರು ಪ್ರಮುಖ ಸಲಹೆಗಳನ್ನು ನೀಡಿದ ಅವರು, ಮೊದಲನೆಯದಾಗಿ ದತ್ತಾಂಶದ ಸಾರ್ವಭೌಮತ್ವವನ್ನು ಗೌರವಿಸುವ ಬಲವಾದ ದತ್ತಾಂಶ ಚೌಕಟ್ಟಿನ ಅಗತ್ಯವಿದೆ ಜಾಗತಿಕವಾಗಿ ಪಾರದರ್ಶಕ ದತ್ತಾಂಶ ವ್ಯವಸ್ಥೆ ರೂಪಿಸುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದು ಅವರು ಒತ್ತಿಹೇಳಿದರು.

ಈ ಶೃಂಗಸಭೆಯು ಮಾನವ ಕೇಂದ್ರಿತ ಮತ್ತು ಸೂಕ್ಷ್ಮ ಜಾಗತಿಕ ಎಐ ಪರಿಸರ ವ್ಯವಸ್ಥೆಯನ್ನು ನಿರ್ಮಿಸುವಲ್ಲಿ ಹೊಸ ಮೈಲಿಗಲ್ಲಾಗಲಿದೆ ಎಂದು ಅವರು ಆಶಯ ವ್ಯಕ್ತಪಡಿಸಿದರು.

****************

ನವದೆಹಲಿಯಲ್ಲಿ ನಡೆಯುತ್ತಿರುವ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯ ನೇಪಥ್ಯದಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಅಬುದಾಭಿ ಯುವರಾಜ ಶೇಖ್ ಖಲಿದ್ ಬಿನ್ ಮೊಹಮ್ಮದ್ ಬಿನ್ ಜ..ಯೆದ್ ಅಲ್ ನಹ್ಯಾನ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು.

ಉಭಯ ದೇಶಗಳ ನಡುವಿನ ಐತಿಹಾಸಿಕ ಸಂಬಂಧವನ್ನು ಸ್ಮರಿಸಿದ ನಾಯಕರು ವಿವಿಧ ಕ್ಷೇತ್ರಗಳಲ್ಲಿನ ಪ್ರಗತಿಯ ಬಗ್ಗೆ ತೃಪ್ತಿ ವ್ಯಕ್ತಪಡಿಸಿದರು. ವಿಶೇಷವಾಗಿ ಕೃತಕಬುದ್ಧಿಮತ್ತೆ ಕ್ಷೇತ್ರದಲ್ಲಿನ ಸಹಕಾರವನ್ನು ಬಲಪಡಿಸಲು ವಿವಿಧ ಮಾರ್ಗಗಳ ಕುರಿತು ಚರ್ಚೆ ನಡೆಸಿದರು.

ಪ್ರಧಾನಿ ನರೇಂದ್ರ ಮೋದಿ ನೆದರ್‌ಲ್ಯಾಂಡ್ಸ್ ಪ್ರಧಾನಿ ಡಿಕ್ ಸ್ಕಾಫ್, ಸ್ವಿಟ್ಜರ್ಲೆಂಡ್ ಅಧ್ಯಕ್ಷ ಗೈ ಪಾರ್ಮೆಲಿನ್ ಮತ್ತು ಗ್ರೀಸ್ ಪ್ರಧಾನಿ ಕಿರಿಯಾಕೋಸ್ ಮಿಟ್ಸೋಟಾಕಿಸ್ ಅವರೊಂದಿಗೆ ಪ್ರತ್ಯೇಕ ದ್ವಿಪಕ್ಷೀಯ ಮಾತುಕತೆಗಳನ್ನು ನಡೆಸಿದರು.

****************

ಇಂಡಿಯಾ ಎಐ ಇಂಪ್ಯಾಕ್ಟ್ ಶೃಂಗಸಭೆಯಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಮಾಡಿದ ಭಾಷಣ, ಕೃತಕಬುದ್ಧಿಮತ್ತೆ ಕುರಿತಾದ ಭಾರತದ ದೂರದೃಷ್ಟಿ ಮತ್ತು ಜವಾಬ್ದಾರಿಯುತ ವಿಧಾನವನ್ನು ಪ್ರತಿಬಿಂಬಿಸುತ್ತದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ತಿಳಿಸಿದ್ದಾರೆ.

ಸಾಮಾಜಿಕ ಜಾಲತಾಣದ ಸಂದೇಶದಲ್ಲಿ ಪ್ರಧಾನಿ ಅವರ ಭಾಷಣವನ್ನು ಶ್ಲಾಘಿಸಿದ ಅವರು, ಪ್ರಧಾನಿ ಅವರು ಮಂಡಿಸಿದ ಮಾನವ್ ದೃಷ್ಟಿಕೋನ, ಮಾನವೀಯತೆಯನ್ನು ತಾಂತ್ರಿಕ ಪ್ರಗತಿಯ ಕೇಂದ್ರ ಬಿಂದುವಾಗಿ ಇರಿಸುತ್ತದೆ ಎಂದಿದ್ದಾರೆ.

ನವೋದ್ಯಮ ಒಳಗೊಳ್ಳುವಿಕೆ ಮತ್ತು ನೈತಿಕ ಆಡಳಿತ ಆಧಾರಿತ ಭಾರತದ ಎಐ ಸಾಧನೆಗಳು ಈ ತಂತ್ರಜ್ಞಾನದ ಭವಿಷ್ಯವನ್ನು ರೂಪಿಸುವಲ್ಲಿ ದೇಶವನ್ನು ಮುಂಚೂಣಿಯಲ್ಲಿರಿಸಿ, ಜಾಗತಿಕ ನಾಯಕನನ್ನಾಗಿ ರೂಪಿಸುತ್ತಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

****************

ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯ ಹಿನ್ನೆಲೆಯಲ್ಲಿ ನವದೆಹಲಿಯಲ್ಲಿ ಇಂದು ಬೊಲಿವಿಯಾ ಉಪಾಧ್ಯಾಕ್ಷ ಎಡ್ಮಂಡ್ ಲಾರಾ ಮೊಂಟಾನೊ ಅವರು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರನ್ನು ಭೇಟಿ ಮಾಡಿದರು.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಸಭೆಯಲ್ಲಿ ಸೌರಶಕ್ತಿ ನಿರ್ಣಾಯಕ ಖನಿಜಗಳು, ಡಿಜಿಟಲೀಕರಣ, ಉನ್ನತ ಶಿಕ್ಷಣ ಮತ್ತು ವೈದ್ಯಕೀಯ ವಲಯದಲ್ಲಿ ಸಹಕಾರವನ್ನು ಬಲಪಡಿಸುವ ಕುರಿತು ಚರ್ಚಿಸಲಾಯಿತು ಎಂದಿದ್ದಾರೆ.

ಉಭಯ ರಾಷ್ಟ್ರಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳಲ್ಲಾಗುತ್ತಿರುವ ಪ್ರಗತಿಯ ಕುರಿತು ಉಭಯ ನಾಯಕರು ತೃಪ್ತಿ ವ್ಯಕ್ತಪಡಿಸಿದ್ದಾರೆ.

****************

ನವದೆಹಲಿಯಲ್ಲಿ ನಡೆದ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯ ಉದ್ಘಾಟನಾ ಸಮಾರಂಭದಲ್ಲಿ ಇಂದು ವಿವಿಧ ತಂತ್ರಜ್ಞಾನ ಕಂಪನಿಗಳು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಪಾಲ್ಗೊಂಡರು.

ಕಾರ್ಯಕ್ರಮದಲ್ಲಿ ಮಾತನಾಡಿದ ಟಾಟಾ ಸನ್ಸ್ ಅಧ್ಯಕ್ಷ ಎನ್.ಚಂದ್ರಶೇಖರನ್, ಎಐ ತಂತ್ರಜ್ಞಾನ ಮುಂದಿನ ಪೀಳಿಗೆಯ ಮೂಲಸೌಕರ್ಯವಾಗಿದ್ದು, ಚಿಪ್‌ಗಳಿಂದ ಹಿಡಿದು ಅಪ್ಲಿಕೇಶನ್‌ವರೆಗೆ ಎಐ ಅನ್ನು ರಾಷ್ಟ್ರದ ಕಾರ್ಯತಂತ್ರದ ಸಾಮರ್ಥ್ಯವನ್ನಾಗಿ ರೂಪಿಸಲಾಗುತ್ತಿದೆ ಎಂದರು.

ಅಲ್ಫಾಬೆಟ್ ಮತ್ತು ಗೂಗಲ್‌ನ ಮುಖ್ಯ ಕಾರ್ಯನಿರ್ವಹಕಾಧಿಕಾರಿ ಸುಂದರ್ ಪಿಚೈ ಮಾತನಾಡಿ, ಕೃತಕಬುದ್ಧಿಮತ್ತೆ ವೈಜ್ಞಾನಿಕ ಆವಿಷ್ಕಾರಗಳನ್ನು ವೇಗಗೊಳಿಸುವ ಅಗಾಧ ಸಾಮರ್ಥ್ಯ ಹೊಂದಿದೆ ಎಂದರು.

ಆಂಥ್ರೊಪಿಕ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ಡಾರಿಯೊ ಅಮೊಡೆ ಮಾತನಾಡಿ, ಎಐ ವ್ಯವಸ್ಥೆಗಳು ಶೀಘ್ರದಲ್ಲೇ ಹೆಚ್ಚಿನ ಕ್ಷೇತ್ರಗಳಲ್ಲಿ ಮಾನವ ಬುದ್ಧಿಮತ್ತೆಯನ್ನು ಮೀರಿಸುವ ಹಂತಕ್ಕೆ ತಲುಪುತ್ತಿವೆ ಎಂದು ಅಭಿಪ್ರಾಯಪಟ್ಟರು.

****************

ಭಾರತ ಮತ್ತು ನ್ಯೂಜಿಲೆಂಡ್ ನಡುವಿನ ತೋಟಗಾರಿಕಾ ಸಹಕಾರದ ಜಂಟಿ ಕಾರ್ಯಕಾರಿ ಗುಂಪಿನ ಮೊದಲ ಸಭೆಯು ಇಂದು ವರ್ಚುವಲ್ ಮೂಲಕ ಯಶಸ್ವಿಯಾಗಿ ನಡೆಯಿತು. ಈ ಸಭೆಯ ಸಹ–ಅಧ್ಯಕ್ಷತೆಯನ್ನು ಭಾರತದ ತೋಟಗಾರಿಕಾ ಜಂಟಿ ಕಾರ್ಯದರ್ಶಿ ಪ್ರಿಯಾ ರಂಜನ್ ಮತ್ತು ನ್ಯೂಜಿಲೆಂಡ್‌ನ ದ್ವಿಪಕ್ಷೀಯ ಸಂಬಂಧ ಮತ್ತು ವ್ಯಾಪಾರ ಇಲಾಖೆಯ ವಿಭಾಗೀಯ ವ್ಯವಸ್ಥಾಪಕ ಸ್ಟೀವ್ ಐನ್ಸ್‌ವರ್ತ್ ವಹಿಸಿದ್ದರು.

ಉಭಯ ದೇಶಗಳ ಹಿರಿಯ ಅಧಿಕಾರಿಗಳು ಮತ್ತು ತಾಂತ್ರಿಕ ತಜ್ಞರು ಭಾಗವಹಿಸಿದ್ದ ಈ ಸಭೆಯಲ್ಲಿ ಪ್ರಮುಖವಾಗಿ ಕಿವಿ ಹಣ್ಣು, ಸೇಬು ಮತ್ತು ಪೇರಳೆ ಬೆಳೆಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಯಿತು.

ಈ ಸಭೆಯಲ್ಲಿ ಎರಡು ಪ್ರಮುಖ ಕ್ರಿಯಾ ಯೋಜನೆಗಳ ಅನುಷ್ಠಾನಕ್ಕಾಗಿ ಕಾಲಮಿತಿ ಮತ್ತು ಮಾರ್ಗಸೂಚಿಯನ್ನು ಅಂತಿಮಗೊಳಿಸಲಾಯಿತು. ತೋಟಗಾರಿಕಾ ಕ್ಷೇತ್ರದಲ್ಲಿ ದ್ವಿಪಕ್ಷೀಯ ಬಾಂಧವ್ಯವನ್ನು ಬಲಪಡಿಸುವ ಉದ್ದೇಶದಿಂದ, ಮುಂದಿನ ದಿನಗಳಲ್ಲಿ ಸರಣಿ ಸಭೆಗಳನ್ನು ನಡೆಸಿ ಪ್ರಗತಿಯನ್ನು ಪರಿಶೀಲಿಸಲು ನಿರ್ಧರಿಸಲಾಯಿತು.

****************

ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿ ಇಂದು ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬಹುರಾಷ್ಟ್ರ ನೌಕಾಸಮರಾಭ್ಯಾಸವಾದ ಮಿಲನ್ 2026ರ 13ನೇ ಆವೃತ್ತಿಯನ್ನು ಉದ್ಘಾಟಿಸಿದರು. ಈ ಬಾರಿಯ ಸಮರಾಭ್ಯಾಸದಲ್ಲಿ ವಿಶ್ವದ 74 ರಾಷ್ಟ್ರಗಳು ಭಾಗವಹಿಸಿದ್ದು, ಇದು ಮಿಲನ್ ಇತಿಹಾಸದಲ್ಲೇ ಅತಿ ದೊಡ್ಡ ಮತ್ತು ಎಲ್ಲರನ್ನೊಳಗೊಂಡ ಆವೃತ್ತಿಯಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಈ ಬಾರಿಯ ದೊಡ್ಡ ಮಟ್ಟದ ಭಾಗವಹಿಸುವಿಕೆಯು ಭಾರತದ ಮೇಲೆ ಜಾಗತಿಕ ಕಡಲ ಸಮುದಾಯಕ್ಕಿರುವ ವಿಶ್ವಾಸ ಮತ್ತು ಜವಾಬ್ದಾರಿಯುತ ಪಾಲುದಾರಿಕೆಗೆ ಸಾಕ್ಷಿಯಾಗಿದೆ ಎಂದು ಬಣ್ಣಿಸಿದ್ದಾರೆ.

ಒಂದು ಪ್ರಾಂತೀಯ ಮಟ್ಟದಲ್ಲಿ ಆರಂಭವಾದ ಈ ಸಮಾರಾಭ್ಯಾಸ ಇಂದು ವಿಶ್ವದ ಪ್ರಮುಖ ನೌಕಾ ಸಂವಹನಗಳಲ್ಲಿ ಒಂದಾಗಿ ಬೆಳೆದಿದೆ. ಇದು ವಿವಿಧ ದೇಶಗಳ ನೌಕಾಪಡೆಗಳ ನಡುವೆ ವೃತ್ತಿಪರ ಸಾಮರ್ಥ್ಯವನ್ನು ಹೆಚ್ಚಿಸಲು ಮತ್ತು ಪರಸ್ಪರ ಮಿತ್ರ ಬಾಂಧವ್ಯವನ್ನು ವೃದ್ಧಿಸಲು ಸಹಕಾರಿಯಾಗಿದೆ ಎಂದು ಸಚಿವ ರಾಜನಾಥ್ ಸಿಂಗ್ ತಿಳಿಸಿದ್ದಾರೆ.

****************

ಚಂಡೀಗಢದ ಟರ್ಮಿನಲ್ ಬ್ಯಲೆಸ್ಟಿಕ್ ಸಂಶೋಧನಾ ಪ್ರಯೋಗಾಲಯದಲ್ಲಿ ಗಗನಯಾನ ನೌಕೆಯ ಸುರಕ್ಷಿತ ಇಳಿಕೆಗೆ ನೆರವಾಗುವ ಡ್ರೋಗ್ ಪ್ಯಾರಾಶೂಟ್‌ಗಳ ಲೋಡ್ ಪರೀಕ್ಷೆಗಳನ್ನು ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ–ಡಿಆರ್‌ಡಿಒ ಯಶಸ್ವಿಯಾಗಿ ನಡೆಸಿದೆ.

ಬಾಹ್ಯಾಕಾಶದಿಂದ ಮರಳಿ ಭೂಮಿಗೆ ಮರಳಿ ಗಗನಯಾತ್ರಿಗಳ ನೌಕೆಯ ವೇಗವನ್ನು ಕಡಿಮೆ ಮಾಡಲು ಮತ್ತು ಅದನ್ನು ಸ್ಥಿರಗೊಳಿಸಲು ಈ ಪ್ಯಾರಾಶೂಟ್ ವಿನ್ಯಾಸಗೊಳಿಸಲಾಗಿದೆ.

ಇಸ್ರೋ ಮತ್ತು ಡಿಆರ್‌ಡಿಒದ ವಿವಿಧ ಅಂಗಸಂಸ್ಥೆಗಳ ತಾಂತ್ರಿಕ ತಂಡಗಳು ಜಂಟಿಯಾಗಿ ಈ ಪರೀಕ್ಷೆಯನ್ನು ನಿನ್ನೆ ನಡೆಸಿದ್ದವು.

****************

ಪರಿಸರ ಸಂರಕ್ಷಣೆಗಾಗಿ ಗಿಡ ನೆಡುವಂತೆ ನಾಗರಿಕರಿಗೆ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಕರೆ ನೀಡಿದ್ದಾರೆ.

ನವದೆಹಲಿಯಲ್ಲಿಂದು ಸಚಿವರ ವಿಶಿಷ್ಟ ವೃಕ್ಷಾರೋಪಣಾ ಸಂಕಲ್ಪದ 5 ವರ್ಷಗಳ ಪೂರೈಕೆಯನ್ನು ಗುರುತಿಸುವ ವಿಶೇಷ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗಿಡಗಳನ್ನು ನೆಡುವುದು ಪರಿಸರವನ್ನು ಉಳಿಸುವ ಅತ್ಯಂತ ಪ್ರಮುಖ ಮಾರ್ಗವಾಗಿದೆ. ಹೆಚ್ಚಿನ ಜನರನ್ನು ಗಿಡ ನೆಡುವ ಅಭಿಯಾನಕ್ಕೆ ಕೈ ಜೋಡಿಸಲು ಒಂದು ಪ್ರತ್ಯೇಕ ವೇದಿಕೆ ಸೃಷ್ಟಿಸುವ ಅಗತ್ಯವಿದೆ ಎಂದರು.

ಉಪಕ್ರಮವನ್ನು ಬೆಂಬಲಿಸಲು ವೃಕ್ಷ ಬ್ಯಾಂಕ್ ಸ್ಥಾಪನೆಯನ್ನು ಪ್ರಸ್ತಾಪಿಸಿದ ಸಚಿವರು, ಈ ಬ್ಯಾಂಕುಗಳ ಮೂಲಕ ಗಿಡಗಳನ್ನು ಅವುಗಳ ನೆಡುವಿಕೆಗೆ ಮತ್ತು ಪೋಷಣೆಗೆ ಅಗತ್ಯವಿರುವ ವ್ಯವಸ್ಥೆಯೊಂದಿಗೆ ಲಭ್ಯವಾಗಿಸಬಹುದು ಎಂದರು.

****************

ಕೊಲಂಬೊದಲ್ಲಿ ನಡೆದ ಐಸಿಸಿ ಪುರುಷರ ಟಿ–20 ವಿಶ್ವಕಪ್ ಕ್ರಿಕೆಟ್‌ನ ದಿನದ ಎರಡನೇ ಪಂದ್ಯದಲ್ಲಿ ಜಿಂಬಾಬ್ವೆ ತಂಡ ಶ್ರೀಲಂಕಾ ತಂಡವನ್ನು 6 ವಿಕೆಟ್‌ಗಳಿಂದ ಮಣಿಸಿದೆ.
ಕಲ್ಕತ್ತಾದಲ್ಲಿ ನಡೆದ ದಿನದ ಮೊದಲ ಪಂದ್ಯದಲ್ಲಿ ಇಟಲಿ ತಂಡವನ್ನು ವೆಸ್ಟ್ ಇಂಡೀಸ್ ತಂಡ 42 ರನ್‌ಗಳಿಂದ ಮಣಿಸಿದೆ.
ಚೆನ್ನೈನಲ್ಲಿ ಪ್ರಸ್ತುತ ನಡೆಯುತ್ತಿರುವ ದಿನದ ಮೂರನೇ ಪಂದ್ಯದಲ್ಲಿ ಅಫ್ಘಾನಿಸ್ತಾನ ವಿರುದ್ಧ ಕೆನಡಾ ಟಾಸ್ ಗೆದ್ದು, ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಮೊದಲು ಬ್ಯಾಟಿಂಗ್ ಮಾಡುತ್ತಿರುವ ಅಫ್ಘಾನಿಸ್ತಾನ್, ಇತ್ತೀಚಿನ ವರದಿ ಬಂದಾಗ 9 ಓವರ್‌ಗಳಲ್ಲಿ 2 ವಿಕೆಟ್ ನಷ್ಟಕ್ಕೆ 74 ರನ್ ಗಳಿಸಿ ಆಡುತ್ತಿದೆ.

********ಮುಕ್ತಾಯ********